Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 28-10-2022

**ಪತ್ರಿಕಾ ಪ್ರಕಟಣೆ:**

## ವಿ. ಡಿ. ಐ. ಟಿ. ಯಲ್ಲಿ ಮೊಳಗಿದ ಕೋಟಿ ಕಂಠ ಗೀತ ಗಾಯನ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ 67ನೇ ಕನ್ನಡ ರಾಜ್ಯೋತ್ಸವದ ಪ್ರಯುಕ್ತ " ಕೋಟಿ ಕಂಠ ಗೀತ ಗಾಯನ" ಕಾರ್ಯಕ್ರಮವನ್ನು ಅಕ್ಟೋಬರ್ 28 ರಂದು ವಿಜೃಂಭಣೆಯಿಂದ ಆಚರಿಸಲಾಯಿತು. ಕರ್ನಾಟಕ ರಾಜ್ಯ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ನಿರ್ದೇಶನ ಹಾಗೂ ವಿ.ತಾ.ವಿ. ಬೆಳಗಾವಿಯ ಆದೇಶದ ಮೇರೆಗೆ ಈ ಕಾರ್ಯಕ್ರಮವನ್ನು ಬೆಳಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ನಾಡಗೀತೆ, ಉದಯವಾಯಿತು ನಮ್ಮ ಚೆಲುವ ಕನ್ನಡ ನಾಡು, ಬಾರಿಸು ಕನ್ನಡ ಡಿಂಡಿಮವ, ಹಚ್ಚೇವು ಕನ್ನಡದ ದೀಪ, ವಿಶ್ವ ವಿನೂತನ ವಿದ್ಯಾ ಚೇತನ, ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು ಸೇರಿದಂತೆ ಆಯ್ದ ಆರು ಹಾಡುಗಳನ್ನು ಮಹಾವಿದ್ಯಾಲಯದ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಡಿ ಕನ್ನಡದ ಹಿರಿಮೆಯನ್ನು ಎತ್ತಿ ಹಿಡಿದರು. ಪ್ರಾಚಾರ್ಯರಾದ ಡಾ. ವಿ. ಎ.ಕುಲಕರ್ಣಿ ಅವರು ನಿತ್ಯದ ಜೀವನದಲ್ಲಿ ಸಾಧ್ಯವಾದಷ್ಟು ಕನ್ನಡ ಭಾಷೆಯನ್ನು ಬಳಸಿ ಕನ್ನಡವನ್ನು ಉಳಿಸಿ ಬೆಳೆಸೋಣ ಎಂದು ಕರೆ ನೀಡಿದರು. ಮಹಾವಿದ್ಯಾಲಯದ "ಕಲ್ಪವೃಕ್ಷ" ಕನ್ನಡ ಸಂಘದ ವತಿಯಿಂದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಈ ಕನ್ನಡ ಸಂಘದ ಸಂಚಾಲಕರಾದ ಪ್ರೊ. ಗುರುರಾಜ ಸತ್ತಿಗೇರಿ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲರಿಗೂ ಹೃತ್ಪೂರ್ವಕವಾಗಿ ಧನ್ಯವಾದ ಅರ್ಪಿಸಿದರು.

ಪ್ರಾಂಶುಪಾಲರು

**Principal**
**KLS Vishwanathrao Deshpande**
**Institute of Technology, Haliyal**


OPPO F21s Pro